ಮಳೆಯಿಂದ ಸಮಸ್ಯೆಗೆ ಒಳಗಾಗಿರುವ ಸ್ಥಳಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ • ಬಿಬಿಎಂಪಿ ಅಧಿಕಾರಿಗಳಿಗೆ ಕಟ್ಟೆಚ್ಚರ

ಮನೆಗೆ ನೀರು ನುಗ್ಗಿದರೆ ಎಂಜಿನಿಯರ್‌ಗಳೇ ಹೊಣೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಎಷ್ಟೇ ಪ್ರಭಾವಿಗಳು ರಾಜಕಾಲುವೆ ಒತ್ತುವರಿ ಮಾಡಿಕೊಂಡಿದ್ದರೂ ಅದನ್ನು ಶೀಘ್ರ ತೆರವುಗೊಳಿಸಬೇಕು. ಮಳೆ ಬಂದಾಗ ಮನೆಗಳಿಗೆ ನೀರು ನುಗ್ಗಿದರೆ ಎಂಜಿನಿಯರ್‌ಗಳನ್ನೇ ಹೊಣೆ ಮಾಡಲಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಸಿದರು.

ನಗರದಲ್ಲಿ ಮಳೆಯಿಂದ ಸಮಸ್ಯೆಗೆ ಒಳಗಾಗುವ ಪ್ರದೇಶಗಳಿಗೆ ಮುಖ್ಯಮಂತ್ರಿಯವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಗಾರು ಮಳೆಗೂ ಮುನ್ನ ಪ್ರವಾಹ ಉಂಟಾಗಬಾರದೆಂದು ಚುನಾವಣಾ ಆಯೋಗದಿಂದ ಅನುಮತಿ ಪಡೆದು 7ರಿಂದ 8 ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಲಾಯಿತು ಎಂದರು.

ವಿಳಂಬವಾಗಿರುವ ಕಾಮಗಾರಿಗಳನ್ನು ತ್ವರಿತಗೊಳಿಸಬೇಕು. ಮರಗಳಲ್ಲಿ ಒಣಗಿರುವ ಕೊಂಬೆಗಳನ್ನು ಕತ್ತರಿಸಬೇಕು. ಪಾದಚಾರಿ ಮಾರ್ಗಗಳನ್ನು ಸರಿಪಡಿಸಬೇಕು. ರಾಜಕಾಲುವೆಗೆ ಕಸ ಹಾಕುವುದನ್ನು ತಡೆಗಟ್ಟಬೇಕು. ಮುಂಗಾರು ಪ್ರಾರಂಭವಾಗುವ ಮುಂಚಿತವಾಗಿ ರಾಜಕಾಲುವೆಗಳ ಹೂಳು ತೆಗೆಯಬೇಕೆಂದು ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು.

'ನಗರದಲ್ಲಿ 860 ಕಿ.ಮೀ. ರಾಜಕಾಲುವೆ ಇದೆ. ನಾನು ಹಿಂದೆ ಮುಖ್ಯಮಂತ್ರಿಯಾಗಿದ್ದಾಗ 491 ಕಿ.ಮೀ. ರಾಜಕಾಲುವೆ ಒತ್ತುವರಿಯನ್ನು ತೆರವು ಮಾಡಲಾಗಿತ್ತು. ಹಿಂದಿನ ಸರ್ಕಾರ 2023ರ ಜನವರಿಯಲ್ಲಿ 193 ಕಿ.ಮೀ. ರಾಜಕಾಲುವೆ ಒತ್ತುವರಿ ತೆರವು ಮಾಡಲು ಕ್ರಮ ಕೈಗೊಂಡಿತ್ತು. ಅದನ್ನು ಮೊದಲೇ ಮಾಡಿದ್ದರೆ ಇಂದು ಸಮಸ್ಯೆ ಇರುತ್ತಿರಲಿಲ್ಲ. ಬಾಕಿ ಉಳಿದಿರುವ 176 ರಾಜಕಾಲುವೆ ಒತ್ತುವರಿ ತೆರವು ಹಾಗೂ ಅಭಿವೃದ್ಧಿಗೆ ₹1,800 ಕೋಟಿ ಅಗತ್ಯವಿದ್ದು, ವಿಶ್ವಬ್ಯಾಂಕ್ ಸುಮಾರು ₹2,000 ಕೋಟಿ ನೀಡಲಿದೆ. ಇದನ್ನು ಉಪಯೋಗಿಸಿಕೊಂಡು ಶೀಘ್ರ ಕಾಮಗಾರಿ ನಡೆಸಲಾಗುತ್ತದೆ ಎಂದರು.

12.15 ಕಿ.ಮೀ. ರಾಜಕಾಲುವೆ ಒತ್ತುವರಿಯ 12 ಪ್ರಕರಣಗಳು ಸಿವಿಲ್ ನ್ಯಾಯಾಲಯದಲ್ಲಿವೆ. ಅಗತ್ಯ ಬಿದ್ದರೆ ವಿಶೇಷ ವಕೀಲರನ್ನು ನೇಮಿಸಿ ಪ್ರಕರಣ ಇತ್ಯರ್ಥಗೊಳಿಸಲಾಗುವುದು ಎಂದು ತಿಳಿಸಿದರು.

ಬೆಂಗಳೂರಿನಲ್ಲಿ 400 ಕೆರೆಗಳಿದ್ದವು. ಈಗಿರುವ ಅನೇಕ ಕೆರೆಗಳು ಹೂಳಿನಿಂದ ತುಂಬಿವೆ ಹಾಗೂ ಒತ್ತುವರಿ ಆಗಿವೆ. ಒತ್ತುವರಿ ತೆರವು ಮಾಡಿ ನೀರು ಹರಿಯಲು ಕಾಲುವೆ ನಿರ್ಮಾಣ ಮಾಡಲು ಸೂಚಿಸಲಾಗಿದೆ. ಕೆರೆಗಳಿಂದ ತೆಗೆಯಲಾಗುವ ಹೂಳನ್ನು ಗುರುತು ಮಾಡಿರುವ ಕ್ವಾರಿಗಳಿಗೆ ಹಾಕಲಾಗುತ್ತಿದೆ ಎಂದು ಮುಖ್ಯಮಂತ್ರಿ ಹೇಳಿದರು.

'ರಸ್ತೆ ನಿರ್ವಹಣೆಗೆ ಶಾಶ್ವತ ವ್ಯವಸ್ಥೆ'

ರಸ್ತೆ ಹಾಗೂ ಗುಂಡಿಗಳನ್ನು ನಿರ್ವಹಿಸಲು ಒಂದು ಶಾಶ್ವತ ನಿರ್ವಹಣಾ ವ್ಯವಸ್ಥೆ ರೂಪಿಸಲು ಬಿಬಿಎಂಪಿ ಹಾಗೂ ಬಿಡಿಎಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದ ವಾರ್ಡ್ ರಸ್ತೆಗಳಲ್ಲಿ 5500 ಗುಂಡಿಗಳು ಬಿದ್ದಿದ್ದು, ಮುಖ್ಯ ಮತ್ತು ಉಪ ಮುಖ್ಯ ರಸ್ತೆಗಳಲ್ಲಿ 557 ಗುಂಡಿಗಳಿವೆ. ಈ ತಿಂಗಳಲ್ಲಿ ಅವುಗಳನ್ನು ಮುಚ್ಚಬೇಕು. ಬಿಬಿಎಂಪಿ, ಬಿಡಿಎ, ಬೆಸ್ಕಾಂ, ಜಲಮಂಡಳಿಗಳು ಪರಸ್ಪರ ಸಮನ್ವಯದಿಂದ ಕೆಲಸ ಮಾಡಲು ಸೂಚಿಸಲಾಗಿದೆ ಎಂದರು.

'ಡಬ್ಬಲ್ ಡೆಕ್ಕರ್ ಇತರ ಭಾಗದಲ್ಲೂ ಬರಲಿ'

'ಸಂಚಾರ ದಟ್ಟಣೆ ನಿವಾರಣೆಗೆ ನಮ್ಮ ಮೆಟ್ರೊದ 'ಡಬ್ಬಲ್ ಡೆಕ್ಕರ್' ಮಾದರಿಯನ್ನು ನಗರದ ಇತರ ಭಾಗಗಳಲ್ಲಿಯೂ ಅಳವಡಿಸಬೇಕು ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿರ್ದೇಶಿಸಿದರು. 'ಸಿಲ್ಕ್ ಬೋರ್ಡ್ ಜಂಕ್ಷನ್ ಸಂಚಾರ ದಟ್ಟಣೆಗೆ ಪರಿಹಾರವಾಗಿ ಈ ವ್ಯವಸ್ಥೆಯನ್ನು ಅಳವಡಿಸಲಾಗುತ್ತಿದೆ. ಇದಲ್ಲದೇ ಬಿಟಿಎಂನಿಂದ ಬನಶಂಕರಿ ಕಡೆಯ, ರಾಘವೇಂದ್ರಸ್ವಾಮಿ ಟೆಂಪಲ್ ಸರ್ಕಲ್, ಜಯನಗರ 5ನೇ ಬ್ಲಾಕ್‌ನಲ್ಲಿ ಅಂಡರ್ ಪಾಸ್ ನಿರ್ಮಾಣಕ್ಕೆ ಬೇಡಿಕೆ ಇದೆ, ಅಂಡರ್‌ಪಾಸ್ ನಿರ್ಮಿಸಿ' ಎಂದು ಸೂಚಿಸಿದರು.

'ಒಣಮರ ಬಿಟ್ಟಿರುವುದು ಅನಾಹುತ ಆಗಲಿ ಅಂತಾನಾ?'

'ಒಣಗಿದ ಮರಗಳನ್ನು ಯಾಕೆ ಬಿಟ್ಟಿದ್ದೀರಿ? ಅನಾಹುತ ಆಗಲಿ ಅಂತಾನಾ?' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಬನಶಂಕರಿ 2ನೇ ಹಂತದ 100 ಅಡಿ ರಸ್ತೆಯಲ್ಲಿ ಒಣಗಿದ ಮರಗಳನ್ನು ಕಂಡು ಅವರು ಸಿಟ್ಟಾದರು.

'ನಗರದಾದ್ಯಂತ ಒಣಮರ, ಅಪಾಯಕಾರಿ ಮರಗಳನ್ನು ತೆರವುಗೊಳಿಸಬೇಕು. ನಗರ ಸೌಂದರ್ಯಕ್ಕೆ ಹೆಚ್ಚು ಒತ್ತು ಕೊಡಬೇಕು. ಪದ್ಮನಾಭನಗರ ಮೇಲ್ಸೇತುವೆ ಬಳಿ ಪಾದಚಾರಿ ಮಾರ್ಗ ದುರಸ್ತಿಗೊಳಿಸಿ. ಕಟ್ಟಡ ತ್ಯಾಜ್ಯ (ಡೆಬ್ರಿಸ್)ಗಳನ್ನು ತೆರವುಗೊಳಿಸಿ' ಎಂದು ಸೂಚಿಸಿದರು.

ಲೋಕಸಭೆ ಚುನಾವಣೆ ಫಲಿತಾಂಶದ ನಂತರ ಬಿಬಿಎಂಪಿ ಚುನಾವಣೆ ಬಗ್ಗೆ ಚಿಂತನೆ ನಡೆಸಲಾಗುವುದು

ಸಿದ್ದರಾಮಯ್ಯ, ಮುಖ್ಯಮಂತ್ರಿ

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗಾಳಿ ಆಂಜನೇಯ ದೇವಸ್ಥಾನದ ಬಳಿ ಮುಂಗಾರು ಮಳೆ ಮುಂಜಾಗ್ರತೆ ಕ್ರಮಗಳ ಬಗ್ಗೆ ಬಿಬಿಎಂಪಿ ಅಧಿಕಾರಿಗಳಿಂದ ಮಾಹಿತಿ ಪಡೆದರು —ಪ್ರಜಾವಾಣಿ ಚಿತ್ರ

'ಸ್ಮೋಕಿ ಪಾನ್' 3ರ ಬಾಲಕಿಯ ಹೊಟ್ಟೆಯಲ್ಲಿ ರಂಧ್ರ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಇಲ್ಲಿನ 12 ವರ್ಷದ ಬಾಲಕಿಯೊಬ್ಬಳಿಗೆ 'ಸ್ಮೋಕಿ ಪಾನ್' (ಲಿಕ್ವಿಡ್ ನೈಟ್ರೋಜನ್ ಪಾನ್) ಸೇವನೆ ಬಳಿಕ ಹೊಟ್ಟೆಯಲ್ಲಿ ರಂಧ್ರ ಕಾಣಿಸಿಕೊಂಡಿದ್ದು, ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ವೈದ್ಯರು ಚಿಕಿತ್ಸೆ ನೀಡಿದ್ದಾರೆ.

ಕಳೆದ ತಿಂಗಳು ವಿವಾಹ ಸಮಾರಂಭವೊಂದರಲ್ಲಿ ದ್ರವ ಸಾರಜನಕ ಹಾಕಲಾಗಿದ್ದ, ಹೊಗೆ ತರಿಸುವ ಈ ಪಾನ್ ಸೇವಿಸಿದ್ದಳು. ಕೆಲ ಸಮಯದ ಬಳಿಕ ಅಸ್ವಸ್ಥಗೊಂಡಿದ್ದರಿಂದ ಆಸ್ಪತ್ರೆಗೆ ದಾಖಲಿಸಲಾಗಿತ್ತು. ವೈದ್ಯಕೀಯ ಪರೀಕ್ಷೆಗಳ ಬಳಿಕ ಹೊಟ್ಟೆಯಲ್ಲಿ ರಂಧ್ರವಾಗಿರುವುದು ದೃಢಪಟ್ಟಿತ್ತು. ಇದರಿಂದಾಗಿ ವೈದ್ಯರು ಬಾಲಕಿಗೆ 'ಎಕ್ಸ್‌ಪ್ಲೋರೆಟರಿ ಲ್ಯಾಪ್ರೊಟಮಿ' ಶಸ್ತ್ರಚಿಕಿತ್ಸೆ ಮಾಡಿದ್ದು, ಆಕೆ ಚೇತರಿಸಿಕೊಂಡಿದ್ದಾಳೆ. 'ಬಾಲಕಿಯ ಹೊಟ್ಟೆಯಲ್ಲಿ 4x5 ಸೆಂ.ಮೀ. ಉದ್ದದ ಅನಾರೋಗ್ಯಕರ ವಸ್ತು ಅಂಟಿಕೊಂಡಿರುವುದು ಪತ್ತೆಯಾಯಿತು. ಶಸ್ತ್ರ ಚಿಕಿತ್ಸೆ ನಡೆಸಿ ಅದನ್ನು ಹೊರತೆಗೆಯಲಾಗಿದ್ದು, 2 ದಿನ ತೀವ್ರ ನಿಗಾ ಘಟಕದಲ್ಲಿ ಇದ್ದಳು. ಆರು ದಿನಗಳ ಬಳಿಕ ಮನೆಗೆ ತೆರಳಿದ್ದಾಳೆ' ಎಂದು ಆಸ್ಪತ್ರೆ ತಿಳಿಸಿದೆ.

ಹೂಡಿಕೆದಾರರ ಶಿಕ್ಷಣ ಮತ್ತು ನಿಧಿ ಸಂರಕ್ಷಣಾ ಪ್ರಾಧಿಕಾರ, ನವದೆಹಲಿ ಇವರಲ್ಲಿನ ಜನರಲ್ ಮ್ಯಾನೇಜರ್, ಡೆಪ್ಯೂಟಿ ಜನರಲ್ ಮ್ಯಾನೇಜರ್ ಹಾಗೂ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ನೇಮಕಾತಿ

ಕಂಪನಿಗಳ ಕಾಯ್ದೆ, 2013ರ ಸೆಕ್ಷನ್ 125ರ ಅಡಿಯಲ್ಲಿ ಶಾಸನಬದ್ಧ ಅಂಗವಾಗಿ ಸ್ಥಾಪನೆಗೊಂಡಿರುವ, ಹೂಡಿಕೆದಾರರ ಶಿಕ್ಷಣ ಮತ್ತು ನಿಧಿ ಸಂರಕ್ಷಣಾ ಪ್ರಾಧಿಕಾರ ಇವರು, ಹೂಡಿಕೆದಾರರ ಶಿಕ್ಷಣ ಮತ್ತು ನಿಧಿ ಸಂರಕ್ಷಣಾ ಪ್ರಾಧಿಕಾರ, ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯ, ಭಾರತ ಸರ್ಕಾರ, ನವದೆಹಲಿ ಇವರಲ್ಲಿನ ಒಂದು (01) ಜನರಲ್ ಮ್ಯಾನೇಜರ್ (ಲೆವೆಲ್–13) ಹುದ್ದೆಗಾಗಿ, ಒಂದು (01) ಡೆಪ್ಯೂಟಿ ಜನರಲ್ ಮ್ಯಾನೇಜರ್ (ಲೆವೆಲ್–11), ಮತ್ತು ಮೂರು (03) ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ (ಲೆವೆಲ್–10) ಹುದ್ದೆಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಿದ್ದಾರೆ. ಸದರಿ ಹುದ್ದೆಗಳು ದೆಹಲಿಯಲ್ಲಿ ಇರುತ್ತವೆ.

2. ನಿರ್ದಿಷ್ಟ ನಮೂನೆಯಲ್ಲಿ ಸಂಪೂರ್ಣ ಭರ್ತಿ ಮಾಡಲಾಗಿರುವ ಅರ್ಜಿಗಳನ್ನು, ಸೂಕ್ತ ವಿಧಾನದ ಮುಖಾಂತರ ನಕಲು ಪ್ರತಿಯಲ್ಲಿ, ಜುಲೈ 21, 2024 ರೊಳಗೆ ಜನರಲ್ ಮ್ಯಾನೇಜರ್, ಐಇಪಿಎಫ್ ಪ್ರಾಧಿಕಾರ, ನೆಲಮಹಡಿ, ಜೀವನ್ ವಿಹಾರ್ ಬಿಲ್ಡಿಂಗ್, 3, ಪಾರ್ಲಿಮೆಂಟ್ ಸ್ಟ್ರೀಟ್, ನವದೆಹಲಿ–110001 ವಿಳಾಸಕ್ಕೆ ತಲುಪುವಂತೆ ರವಾನಿಸತಕ್ಕದ್ದು.

3. ಅರ್ಜಿ ನಮೂನೆ, ಅರ್ಹತಾ ಷರತ್ತುಗಳು, ಅಗತ್ಯ ಅರ್ಹತೆಗಳು ಹಾಗೂ ಇನ್ನಿತರ ವಿವರಗಳಿಗಾಗಿ, ಸೇವೆಯ ಷರತ್ತು ಮತ್ತು ನಿಬಂಧನೆಗಳಿಗಾಗಿ, ದಯವಿಟ್ಟು ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯದ www.mca.gov.in ಅಥವಾ www.iepf.gov.in ವೆಬ್‌ಸೈಟ್‌ಗೆ ಲಾಗಾನ್ ಮಾಡಿರಿ.

• ಮೇಲೆ ತಿಳಿಸಲಾಗಿರುವ ಖಾಲಿಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿರುತ್ತದೆ. ನೇಮಕಾತಿ ಸಮಯದಲ್ಲಿ ಇದು ಬದಲಾಗಬಹುದಾಗಿರುತ್ತದೆ. CBC 07110/12/0001/2425

ಸುಧಾ, ಮಯೂರ ಓದಿರಿ

ನೈಋತ್ಯ ರೈಲ್ವೆ

ಇ–ಟೆಂಡರು ಸೂಚನೆ ಸಂ.: CAO/CN/BNC/EPC/69/2023 ದಿನಾಂಕ: 05.09.2023, ರಂದು ಕರೆಯಲಾದ ಟೆಂಡರ್‌ನ ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ಮುಚ್ಚುವ ಕಾರಣದಿಂದಾಗಿ ರದ್ದುಗೊಳಿಸಲಾಗಿದೆ

ಕಾಮಗಾರಿಯ ವಿವರ	ಅಂದಾಜು ಮೌಲ್ಯ
ಬಾಗಲಕೋಟೆ–ಕುಡಚಿ ಹೊಸ ಲೈನ್ ಯೋಜನೆಯ (142 ಕಿಮೀ) ಅಡಿಯಲ್ಲಿ, ಸಿಗ್ನಲ್, ದೂರಸಂಪರ್ಕ & ವಿದ್ಯುತ್ ಕಾಮಗಾರಿಗಳನ್ನೊಳಗೊಂಡಂತೆ ಜಮಖಂಡಿ ರೋಡ್ (ಒಳಪಡಿಸಿ) ಮತ್ತು ಜಗದಾಳ್ (ಒಳಪಡಿಸಿ) ನಡುವೆ 20.585 ಕಿಮೀ. ದೂರಕ್ಕೆ ಹೊಸ ಬ್ರಾಡ್ ಗೇಜ್ ಲೈನ್ ಟ್ರ್ಯಾಕ್‌ನ ನಿರ್ಮಾಣ. (ಟೆಂಡರು ಉಲ್ಲೇಖ ಸಂ. JAMKHANDIROAD-JAGADAL-EPC).	ರೂ. 4,22,46,37,345/-

ಕೊನೆಗೊಳ್ಳುವ ದಿನಾಂಕ	
ಪ್ರಸ್ತುತ	ಪರಿಷ್ಕರಣೆ
03.06.2024 (15:00 ಗಂಟೆಗೆ)	ಟೆಂಡರನ್ನು ರದ್ದುಗೊಳಿಸಲಾಗಿದೆ

ಹೆಚ್ಚಿನ ಮಾಹಿತಿಗಾಗಿ www.ireps.gov.in ಗೆ ಲಾಗ್ ಆನ್ ಆಗಿ

ಉಪ ಮುಖ್ಯ ಇಂಜಿನಿಯರ್/ನಿರ್ಮಾಣ/ಕಾಮಗಾರಿ ಬೆಂಗಳೂರು ದಂಡು

PUB/104/AAD/PRB/SWR/2024-25

South Western Railway - SWR | SWRRLY | SWRRLY

ಭಾರತ ಸರ್ಕಾರ, ಬಾಹ್ಯಾಕಾಶ ಇಲಾಖೆ, ಎಲೆಕ್ಟ್ರೋ–ಆಪ್ಟಿಕ್ಸ್ ಸಿಸ್ಟಮ್‌ಗಳಿಗಾಗಿ ಪ್ರಯೋಗಾಲಯ (ಎಲ್‌ಇಒಎಸ್) ಪೀಣ್ಯ, ಬೆಂಗಳೂರು–560058, ಎಲ್‌ಇಒಎಸ್ ನಿರ್ಮಾಣ ಮತ್ತು ನಿರ್ವಹಣಾ ಸಮೂಹ (ಎಲ್‌ಸಿಎಂಜಿ) (ದೂರವಾಣಿ: (080)–22685088, 5193, 5093, 5086, (ಫ್ಯಾಕ್ಸ್: (080)–28392310].

ಇಸ್ರೋ isro

ಸಂಕ್ಷಿಪ್ತ ಇ–ಟೆಂಡರ್ (ಎನ್‌ಐಇಟಿ) ಆಹ್ವಾನಿಸುವ ಪ್ರಕಟಣೆ

ಭಾರತದ ರಾಷ್ಟ್ರಪತಿಗಳ ಪರವಾಗಿ, ಈ ಕೆಳಗಿನ ಕೆಲಸಕ್ಕಾಗಿ ಐಟಂ ದರದ ಟೆಂಡರ್‌ನ್ನು ಆಹ್ವಾನಿಸಲಾಗಿದೆ.

ಕೆಲಸದ ಹೆಸರು; ಎನ್‌ಐಟಿ ನಂ. & ದಿನಾಂಕ: ಎಲ್‌ಇಒಎಸ್ ಕ್ಯಾಂಪಸ್, ಪೀಣ್ಯ, ಬೆಂಗಳೂರು–560058ರಲ್ಲಿ ಸಿಸಿಟಿವಿ ಮಾನಿಟರಿಂಗ್ ಕೊಠಡಿ ಮತ್ತು ವಿವಿಧ ವಿದ್ಯುತ್ ಕೆಲಸಗಳು. ಎನ್‌ಐಇಟಿ: LEOS/CMG/EMN-02/2024-25, ದಿನಾಂಕ : 15.05.2024, **ಟೆಂಡರ್ ಮತ್ತು ಇಎಂಡಿಗೆ ಇಡಲಾದ ಅಂದಾಜು ವೆಚ್ಚ : ರೂ. 10.45 ಲಕ್ಷಗಳು, ಇಎಂಡಿ ರೂ.20,900/– ತಿಂಗಳುಗಳಲ್ಲಿ ಪೂರ್ಣಗೊಳಿಸುವ ಅವಧಿ:** 06 ತಿಂಗಳುಗಳು, ಟೆಂಡರ್ ಡಾಕ್ಯುಮೆಂಟ್ ಅನ್ನು ಡೌನ್‌ಲೋಡ್ ಮಾಡಬಹುದು, **ತೆರೆಯುವ ದಿನಾಂಕ :** 21.05.2024, **ಮುಕ್ತಾಯವಾಗುವ ದಿನಾಂಕ :** 06.06.2024

ಕೆಲಸದ ಹೆಸರು; ಎನ್‌ಐಟಿ ನಂ. & ದಿನಾಂಕ: ಅಡ್ಮಿನ್ ಬ್ಲಾಕ್, ಎಲ್‌ಇಒಎಸ್ ಕ್ಯಾಂಪಸ್, ಬೆಂಗಳೂರು–58ನಲ್ಲಿ ಉಪನ್ಯಾಸ ಸಭಾಂಗಣಕ್ಕಾಗಿ ಹೊರ ಆವರಣದೊಂದಿಗೆ 13 ಪ್ರಯಾಣಿಕರನ್ನು ಸರಬರಾಜು ಮಾಡಲು ಮತ್ತು ನಿರ್ಮಿಸಲು (ಎಸಿಪಿ ಕ್ಲಾಡಿಂಗ್ ಮತ್ತು ಸ್ಟ್ರಕ್ಚರಲ್ ಗ್ಲ್ಯಾಸಿಂಗ್) ಕೆಲಸ. ಎನ್‌ಐಇಟಿ: CMG/LEOS/2023-24/LMW-11/R1, ದಿನಾಂಕ : 14.05.2024, **ಟೆಂಡರ್ ಮತ್ತು ಇಎಂಡಿಗೆ ಇಡಲಾದ ಅಂದಾಜು ವೆಚ್ಚ : ರೂ.23.21 ಲಕ್ಷಗಳು, ಇಎಂಡಿ ರೂ.46,414/– ತಿಂಗಳುಗಳಲ್ಲಿ ಪೂರ್ಣಗೊಳಿಸುವ ಅವಧಿ:** (04) ನಾಲ್ಕು ತಿಂಗಳುಗಳು, ಟೆಂಡರ್ ಡಾಕ್ಯುಮೆಂಟ್ ಅನ್ನು ಡೌನ್‌ಲೋಡ್ ಮಾಡಬಹುದು, **ತೆರೆಯುವ ದಿನಾಂಕ :** 17.05.2024, **ಮುಕ್ತಾಯವಾಗುವ ದಿನಾಂಕ :** 03.06.2024

ಕೆಲಸದ ಹೆಸರು; ಎನ್‌ಐಟಿ ನಂ. & ದಿನಾಂಕ: ಎಲ್‌ಇಒಎಸ್ ಕ್ಯಾಂಪಸ್ ಮತ್ತು ಗೆಸ್ಟ್ ಹೌಸ್ ಮತ್ತು ಐಎಸ್‌ಆರ್‌ಎಡಿ ಕ್ಯಾಂಪಸ್, ಪೀಣ್ಯ, ಬೆಂಗಳೂರು–58 ನಲ್ಲಿ ಒಂದು ವರ್ಷಕ್ಕೆ ಕಾವೇರಿ ನೀರು, ಬೋರ್ ವೆಲ್ ನೀರು, ಸಂಸ್ಕರಿಸಿದ ನೀರು ಮತ್ತು ಎಸ್‌ಟಿಪಿಯಿಂದ ಹೊರಸೂಸುವ ನೀರಿನ ಭೌತಿಕ–ರಾಸಾಯನಿಕ ಮತ್ತು ಬ್ಯಾಕ್ಟೀರಿಯೊಲಾಜಿಕಲ್ ಪರೀಕ್ಷೆಯನ್ನು ಕೈಗೊಳ್ಳಲು ಒಪ್ಪಂದ; ಎನ್‌ಐಇಟಿ: CMG/LEOS/2023-24/LMN-14 ದಿನಾಂಕ : 14.05.2024, **ಟೆಂಡರ್ ಮತ್ತು ಇಎಂಡಿಗೆ ಇಡಲಾದ ಅಂದಾಜು ವೆಚ್ಚ : ರೂ. 2.69 ಲಕ್ಷಗಳು, ಇಎಂಡಿ ರೂ.5,373/–, ತಿಂಗಳುಗಳಲ್ಲಿ ಪೂರ್ಣಗೊಳಿಸುವ ಅವಧಿ:** 01 ವರ್ಷ, ಟೆಂಡರ್ ಡಾಕ್ಯುಮೆಂಟ್ ಅನ್ನು ಡೌನ್‌ಲೋಡ್ ಮಾಡಬಹುದು, **ತೆರೆಯುವ ದಿನಾಂಕ :** 17.05.2024, **ಮುಕ್ತಾಯವಾಗುವ ದಿನಾಂಕ :** 03.06.2024

ಕೆಲಸದ ಹೆಸರು; ಎನ್‌ಐಟಿ ನಂ. & ದಿನಾಂಕ: ಎಲ್‌ಇಒಎಸ್ ಕ್ಯಾಂಪಸ್, ಆರ್ಯಭಟ್ಟ ಕ್ಯಾಂಪಸ್ ಮತ್ತು ಐಎಸ್‌ಆರ್‌ಎಡಿ ಕ್ಯಾಂಪಸ್ ಪೀಣ್ಯ, ಬೆಂಗಳೂರು – 560058 ನಲ್ಲಿ ವಿವಿಧ ಸ್ಥಳಗಳಲ್ಲಿ ಪಿವಿಸಿ ನೆಲಹಾಸನ್ನು ಒದಗಿಸುವ ಒಪ್ಪಂದ, ಎನ್‌ಐಇಟಿ: CMG/LEOS/2024-25/LMN-01 ದಿನಾಂಕ : 14.05.2024, **ಟೆಂಡರ್ ಮತ್ತು ಇಎಂಡಿಗೆ ಇಡಲಾದ ಅಂದಾಜು ವೆಚ್ಚ : ರೂ. 5.35 ಲಕ್ಷಗಳು, ಇಎಂಡಿ ರೂ.10,693/–, ತಿಂಗಳುಗಳಲ್ಲಿ ಪೂರ್ಣಗೊಳಿಸುವ ಅವಧಿ:** 01 ವರ್ಷ, ಟೆಂಡರ್ ಡಾಕ್ಯುಮೆಂಟ್ ಅನ್ನು ಡೌನ್‌ಲೋಡ್ ಮಾಡಬಹುದು, **ತೆರೆಯುವ ದಿನಾಂಕ :** 17.05.2024, **ಮುಕ್ತಾಯವಾಗುವ ದಿನಾಂಕ :** 03.06.2024

ಕೆಲಸದ ಹೆಸರು; ಎನ್‌ಐಟಿ ನಂ. & ದಿನಾಂಕ: ಎಲ್‌ಇಒಎಸ್, ಪೀಣ್ಯ, ಬೆಂಗಳೂರು–58 ರಲ್ಲಿ ಸಿಸಿಟಿವಿ ಮಾನಿಟರಿಂಗ್ ಕೊಠಡಿಗಾಗಿ ಪ್ರಸ್ತಾವಿತ ಸಿವಿಲ್ ಕೆಲಸ. ಎನ್‌ಐಇಟಿ: CMG/LEOS/2024-25/LMW-02 ದಿನಾಂಕ : 14.05.2024, **ಟೆಂಡರ್ ಮತ್ತು ಇಎಂಡಿಗೆ ಇಡಲಾದ ಅಂದಾಜು ವೆಚ್ಚ : ರೂ. 10.97 ಲಕ್ಷಗಳು, ಇಎಂಡಿ ರೂ.21,941/–, ತಿಂಗಳುಗಳಲ್ಲಿ ಪೂರ್ಣಗೊಳಿಸುವ ಅವಧಿ:** 06 ತಿಂಗಳು, ಟೆಂಡರ್ ಡಾಕ್ಯುಮೆಂಟ್ ಅನ್ನು ಡೌನ್‌ಲೋಡ್ ಮಾಡಬಹುದು, **ತೆರೆಯುವ ದಿನಾಂಕ :** 17.05.2024, **ಮುಕ್ತಾಯವಾಗುವ ದಿನಾಂಕ :** 03.06.2024

ಕೆಲಸದ ಹೆಸರು; ಎನ್‌ಐಟಿ ನಂ. & ದಿನಾಂಕ: ಐಎಸ್‌ಆರ್‌ಎಡಿ ಕ್ಯಾಂಪಸ್, ಎಲ್‌ಇಒಎಸ್, ಪೀಣ್ಯ, ಬೆಂಗಳೂರು–58 ರಲ್ಲಿ ಹಾನಿಗೊಳಗಾದ ಕಾಂಪೌಂಡ್ ಗೋಡೆಗೆ ದುರಸ್ತಿ ಮಾಡಲು ಉದ್ದೇಶಿಸಲಾಗಿದೆ. ಎನ್‌ಐಇಟಿ: CMG/LEOS/2023-24/LMN-03/R1 ದಿನಾಂಕ : 14.05.2024, **ಟೆಂಡರ್ ಮತ್ತು ಇಎಂಡಿಗೆ ಇಡಲಾದ ಅಂದಾಜು ವೆಚ್ಚ : ರೂ. 17.39 ಲಕ್ಷಗಳು, ಇಎಂಡಿ ರೂ.34,782/–, ತಿಂಗಳುಗಳಲ್ಲಿ ಪೂರ್ಣಗೊಳಿಸುವ ಅವಧಿ:** 04 ತಿಂಗಳು, ಟೆಂಡರ್ ಡಾಕ್ಯುಮೆಂಟ್ ಅನ್ನು ಡೌನ್‌ಲೋಡ್ ಮಾಡಬಹುದು, **ತೆರೆಯುವ ದಿನಾಂಕ :** 17.05.2024, **ಮುಕ್ತಾಯವಾಗುವ ದಿನಾಂಕ :** 03.06.2024

ಕೆಲಸದ ಹೆಸರು; ಎನ್‌ಐಟಿ ನಂ. & ದಿನಾಂಕ: ಎಲ್‌ಇಒಎಸ್, ಪೀಣ್ಯ, ಬೆಂಗಳೂರು–560058 ರಲ್ಲಿ ಅಗತ್ಯ ಸಿವಿಲ್ ಕೆಲಸಗಳೊಂದಿಗೆ ಬೀದಿ ದೀಪದ ಕಂಬಗಳಿಗೆ XLPE ಇನ್ಸುಲೇಟೆಡ್ ಅಲ್ಯೂಮಿನಿಯಂ ಕೇಬಲ್ ಪೂರೈಕೆ, ಎಲ್‌ಇಡಿ ಹೊರಾಂಗಣ ಲೈಟ್ ಫಿಟ್ಟಿಂಗ್‌ಗಳ ಪೂರೈಕೆ ಮತ್ತು ಸ್ಥಾಪನೆ. ಎನ್‌ಐಇಟಿ: LEOS/CMG/EMN-01/2024-25 ದಿನಾಂಕ : 17.05.2024, **ಟೆಂಡರ್ ಮತ್ತು ಇಎಂಡಿಗೆ ಇಡಲಾದ ಅಂದಾಜು ವೆಚ್ಚ : ರೂ. 22.96 ಲಕ್ಷಗಳು, ಇಎಂಡಿ ರೂ.45,920/–, ತಿಂಗಳುಗಳಲ್ಲಿ ಪೂರ್ಣಗೊಳಿಸುವ ಅವಧಿ:** 04 ತಿಂಗಳು, ಟೆಂಡರ್ ಡಾಕ್ಯುಮೆಂಟ್ ಅನ್ನು ಡೌನ್‌ಲೋಡ್ ಮಾಡಬಹುದು, **ತೆರೆಯುವ ದಿನಾಂಕ :** 23.05.2024 **ಮುಕ್ತಾಯವಾಗುವ ದಿನಾಂಕ :** 10.06.2024

ಆಸಕ್ತ ಟೆಂಡರುದಾರರು ಇ–ಟೆಂಡರ್ (ಎನ್‌ಐಇಟಿ) ಆಹ್ವಾನದ ಪ್ರಕಟಣೆಯ ಅರ್ಹತಾ ಮಾನದಂಡ ಮತ್ತು ಇತರೆ ವಿವರವನ್ನು **www.isro.gov.in** ವೆಬ್‌ಸೈಟ್‌ನಲ್ಲಿ ಪರಿಶೀಲಿಸಬಹುದು ಮತ್ತು ಟೆಂಡರ್ ದಾಖಲೆಗಳನ್ನು **www.tenderwizard.com/ISRO** ನಿಂದ ಡೌನ್‌ಲೋಡ್ ಮಾಡಬಹುದು.

ಸಹಿ/– ಸಮೂಹ ನಿರ್ದೇಶಕ (ನಿರ್ಮಾಣ ಮತ್ತು ನಿರ್ವಹಣಾ ಸಮೂಹ) (ಸಿ&ಎಂಜಿ) ಯುಆರ್‌ಎಸ್‌ಸಿ, ಬೆಂಗಳೂರು.

ರಾಷ್ಟ್ರೀಯ ವಿದ್ಯುತ್ ತರಬೇತಿ ಸಂಸ್ಥೆ

ವಿದ್ಯುತ್ ಸಚಿವಾಲಯ, ಭಾರತ ಸರ್ಕಾರ

ಎನ್‌ಪಿಟಿಐ ಕಾಂಪ್ಲೆಕ್ಸ್, ಸೆಕ್ಟರ್–33, ಫರೀದಾಬಾದ್–121003, ಹರ್ಯಾಣ, ಭಾರತ

NPTI

ಸೆಂಟರ್ ಫಾರ್ ಅಡ್ವಾನ್ಸ್ಡ್ ಮ್ಯಾನೇಜ್‌ಮೆಂಟ್ ಅಂಡ್ ಪವರ್ ಸ್ಟಡೀಸ್ (ಸಿಎಎಂಪಿಎಸ್) ಆಹ್ವಾನ

ಎಂಬಿಎ ಪವರ್ ಮ್ಯಾನೇಜ್‌ಮೆಂಟ್ ಪ್ರವೇಶಾತಿಗಾಗಿ

ಎನ್‌ಎಟಿ 2024 ಜೂನ್ 21, 2024

18ನೇ ಬ್ಯಾಚ್ 2024–25

ಕೆಳಗಿನ ಸ್ಪೆಷಲೈಸೇಶನ್‌ಗಳಲ್ಲಿ: ಸಸ್ಟೇನೆಬಿಲಿಟಿ/ಸೈಬರ್ ಸೆಕ್ಯೂರಿಟಿ & ಕ್ಲೌಡ್/ಡೇಟಾ ಸೈನ್ಸ್ & ಡೇಟಾ ಅನಾಲೈಟಿಕ್ಸ್

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: ಜೂನ್ 19, 2024

ಎನ್‌ಪಿಟಿಐ ಪಿಜಿಐಸಿ ವಿದ್ಯಾರ್ಥಿಗಳಿಗೆ 25% ರಿಯಾಯಿತಿ

ಮಹಿಳಾ ವಿದ್ಯಾರ್ಥಿಗಳಿಗೆ 10% ರಿಯಾಯಿತಿ

ಹಿಂದಿನ ಪ್ಲೇಸ್‌ಮೆಂಟ್‌ಗಳು: Su-Kam, pwc, JSW, tcs, RELIANCE Power, vedanta, GMR, TATA POWER-DDL, CRISIL, ESSAR, adani, Infosys, BSES, Azure Power, Deloitte, NPCL, Torrent Power, SUZLON

• ಎಲ್ಲಾ ಅಭ್ಯರ್ಥಿಗಳು ಕ್ಯಾಟ್/ಮ್ಯಾಟ್/ಸಿಮ್ಯಾಟ್/ಎಕ್ಸ್‌ಎಟಿ/ಸಿಎಂಎಟಿ/ಜಿಮ್ಯಾಟ್ ಸ್ಕೋರ್ ಕಾರ್ಡ್ ಹೊಂದಿರಬೇಕು ಅಥವಾ ಎನ್‌ಪಿಟಿಐ ಅಡ್ಮಿಷನ್ ಟೆಸ್ಟ್ (ಎನ್‌ಎಟಿ-2024) ಹಾಜರಾಗುವುದು ಕಡ್ಡಾಯ.

• ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದೇ ಪದವಿಯಲ್ಲಿ 60% ಮೇಲ್ಪಟ್ಟ ಮತ್ತು ಹೆಚ್ಚಿನ ಅಂಕಗಳನ್ನು ಪಡೆದಿರಬೇಕು

100% ಪ್ಲೇಸ್‌ಮೆಂಟ್ ದಾಖಲೆ

CBC 34107/12/0003/2425

www.npti.gov.in | mbapm@npti.ac.in | 9667737323, 8130222447, 8882444435, 9654260217, 9311622338

ನಿಧನ ವಾರ್ತೆ

ಪ್ರೆಸಿಲ್ಲ ಪೆರೇರಾ

ಬೆಂಗಳೂರು: ಅಖಿಲ ಕರ್ನಾಟಕ ಕ್ಯಾಥೋಲಿಕ್ ಕ್ರೈಸ್ತರ ಕನ್ನಡ ಸಂಘದ ಸ್ಥಾಪಕರಾಗಿದ್ದ ಜೆ.ಆರ್. ಪೆರೇರಾ ಅವರ ಪತ್ನಿ ಪ್ರೆಸಿಲ್ಲ ಪೆರೇರಾ (81) ಸೋಮವಾರ ನಿಧನರಾದರು. ಅವರಿಗೆ ಪುತ್ರ, ಪುತ್ರಿ ಇದ್ದಾರೆ. ಪ್ರೆಸಿಲ್ಲ ಅವರು ಯಶವಂತಪುರದ ಕಮಲಾ ನೆಹರೂ ಬಡಾವಣೆಯಲ್ಲಿ ವಾಸವಾಗಿದ್ದರು. ಇವರು ನಗರದ ಎಚ್‌ಎಂಟಿ ಶಾಲೆಯಲ್ಲಿ ಶಿಕ್ಷಕಿಯಾಗಿಯೂ ಕೆಲಸ ಮಾಡಿದ್ದರು.

ಮೈಸೂರು ರಸ್ತೆಯಲ್ಲಿರುವ ಕ್ರೈಸ್ತರ ರುದ್ರಭೂಮಿಯಲ್ಲಿ ಮಂಗಳವಾರ ಇವರ ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬದ ಸದಸ್ಯರು ತಿಳಿಸಿದ್ದಾರೆ.

ಗುರು ಪುರಸ್ಕಾರ ಪ್ರಶಸ್ತಿ: ಅರ್ಜಿ ಆಹ್ವಾನ

ಬೆಂಗಳೂರು: ಶಿಕ್ಷಣ ಕ್ಷೇತ್ರದಲ್ಲಿ ಅತ್ಯುತ್ತಮ ಕೆಲಸ ಮಾಡಿರುವ ಶಿಕ್ಷಕರಿಗೆ ಸಹಯೋಗ್ ಫೌಂಡೇಶನ್ 'ಗುರು ಪುರಸ್ಕಾರ' ನೀಡಲು ನಿರ್ಧರಿಸಿದೆ. ಸರ್ಕಾರಿ ಮತ್ತು ಖಾಸಗಿ ಶಾಲೆ, ಕಾಲೇಜುಗಳ ಶಿಕ್ಷಕರು, ಪ್ರಾಂಶುಪಾಲರು, ಶೈಕ್ಷಣಿಕ ಕ್ಷೇತ್ರಕ್ಕೆ ಅತ್ಯುತ್ತಮ ಕೊಡುಗೆ ನೀಡಿದ ಶಿಕ್ಷಣ ಇಲಾಖೆಯ ಅಧಿಕಾರಿಗಳು ಅರ್ಜಿ ಸಲ್ಲಿಸಬಹುದು. ಇಲ್ಲವೇ ಬೇರೆಯವರು ನಾಮನಿರ್ದೇಶನ ಮಾಡಬಹುದು.

ಅಂತರರಾಷ್ಟ್ರೀಯ ಮಾನ್ಯತೆ ಇರುವ ಈ ಪ್ರಶಸ್ತಿಗೆ ಪಾತ್ರರಾದವರಿಗೆ ಅಂತರರಾಷ್ಟ್ರೀಯ ಶೈಕ್ಷಣಿಕ ಪ್ರವಾಸಗಳಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ. ಯುರೋಪ್, ಯುಎಸ್‌ಎಗೆ ಭೇಟಿ ನೀಡಬಹುದು. ಮಾಹಿತಿಗೆ ಅಧಿಕೃತ ವೆಬ್ ಸೈಟ್ www.gurupuraskar.comಗೆ ಭೇಟಿ ನೀಡಬಹುದು ಎಂದು 'ಸಹಯೋಗ್ ಫೌಂಡೇಶನ್' ಮ್ಯಾನೇಜಿಂಗ್ ಟ್ರಸ್ಟಿ ಯೋಗಿ ಅನೀಶ್ ತಿಳಿಸಿದ್ದಾರೆ.

ಗಾಳಿ ಆಂಜನೇಯ ದೇವಸ್ಥಾನದ ಬಳಿ ಪ್ರವಾಹ ನಿಯಂತ್ರಣಕ್ಕೆ ಕ್ರಮ

'ಕಾಲುವೆ: ₹11 ಕೋಟಿ ಯೋಜನೆ'

ಪ್ರಜಾವಾಣಿ ವಾರ್ತೆ

ಮೈಸೂರು ರಸ್ತೆಯಲ್ಲಿರುವ ಗಾಳಿ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಪ್ರವಾಹ ನಿಯಂತ್ರಿಸಲು ಸಮಾನಾಂತರ ಕಾಲುವೆ ನಿರ್ಮಿಸಬೇಕು. **₹11.5 ಕೋಟಿ ವೆಚ್ಚದ ಈ ಯೋಜನೆಯನ್ನು ಕೂಡಲೇ ಅನುಷ್ಠಾನಗೊಳಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.**

ನಗರದಲ್ಲಿ ಮಳೆಯಿಂದ ಸಮಸ್ಯೆಗೆ ಒಳಗಾಗುವ ಪ್ರದೇಶಗಳಿಗೆ ಮುಖ್ಯಮಂತ್ರಿಯವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿ ಅಧಿಕಾರಿಗಳಿಗೆ ಹಲವು ಸೂಚನೆಗಳನ್ನು ನೀಡಿದರು.

ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಸುತ್ತಮುತ್ತ ರಾಜಕಾಲುವೆಗೆ ಸಾರ್ವಜನಿಕರು ಕಸ ಎಸೆಯುವುದನ್ನು ತಡೆಗಟ್ಟಲು ಕ್ರಮ ವಹಿಸಬೇಕು. ಕಾಲಮಿತಿಯಲ್ಲಿ ಕೆಲಸವಾಗಬೇಕು. ಇಲ್ಲಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸದಿದ್ದರೆ ಅಮಾನತು ಮಾಡಲಾಗುತ್ತದೆ ಎಂದು ಬಿಬಿಎಂಪಿ ರಾಜಕಾಲುವೆ ವಿಭಾಗದ ಮುಖ್ಯ ಎಂಜಿನಿಯರ್‌ಗೆ ಸೂಚಿಸಿದರು.

ನಾಯಂಡಹಳ್ಳಿ: 'ಇಲ್ಲಿನ ರಾಜಕಾಲುವೆಯಲ್ಲಿ ಮಳೆಗಾಲದಲ್ಲಿ ಪ್ರವಾಹ ಉಂಟಾಗುತ್ತದೆ. ನೀರು ಸರಾಗವಾಗಿ ಹರಿದುಹೋಗಲು ಹೆಚ್ಚುವರಿ ಕಾಲುವೆ ಅಗತ್ಯವಿದೆ. ₹7 ಕೋಟಿ ವೆಚ್ಚದ ಕಾಮಗಾರಿ ಅನುಮೋದನೆಯಾಗಿದ್ದು, ಹಣಕಾಸು ಇಲಾಖೆ ಹಾಗೂ ಕಂದಾಯ ಇಲಾಖೆಯ ಅನುಮೋದನೆ ಅಗತ್ಯವಿದೆ' ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದರು.

'ಹಣಕಾಸು ಇಲಾಖೆ ಹಾಗೂ ಕಂದಾಯ ಇಲಾಖೆಯಿಂದ ಅನುಮೋದನೆ ಕೊಡಿಸಿ' ಎಂದು ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್ ಅವರಿಗೆ ಮುಖ್ಯಮಂತ್ರಿ ಸೂಚಿಸಿದರು. ಒಂದು ವರ್ಷದಲ್ಲಿ ಕಾಮಗಾರಿ ಮುಗಿಯಬೇಕು ಎಂದು ಬಿಬಿಎಂಪಿ ಮುಖ್ಯ ಆಯುಕ್ತರಿಗೆ ತಾಕೀತು ಮಾಡಿದರು.

ಕೋಡಿ ಚಿಕ್ಕನಹಳ್ಳಿ: 'ರಾಜಕಾಲುವೆಯಿಂದ ನೀರು ಹೊರಗೆ ಹರಿದು, ಮನೆಗಳಿಗೆ ನೀರು ನುಗ್ಗುತ್ತಿದೆ. ಹೊರ ಬರುವ ನೀರನ್ನು ಪಂಪ್ ಮಾಡಿ ಮಡಿವಾಳ ಕೆರೆಗೆ ಹರಿಸಬೇಕು. ಮಡಿವಾಳ ಕೆರೆಗೆ ಕಾಲುವೆ ನಿರ್ಮಾಣದ ₹4.3 ಕೋಟಿ ವೆಚ್ಚದ ಕಾಮಗಾರಿ ಆರಂಭಿಸಲು ಸಿದ್ದರಾಮಯ್ಯ ಸೂಚಿಸಿದರು.

ಸಿಲ್ಕ್ ಬೋರ್ಡ್, ಹೊಸೂರು ಮುಖ್ಯರಸ್ತೆ: ನಮ್ಮ ಮೆಟ್ರೊ ಕಾಮಗಾರಿಯಿಂದಾಗಿ ಮಳೆನೀರು ಚರಂಡಿ ವಿಸ್ತೀರ್ಣ ಕಡಿಮೆಯಾಗಿ, ಪ್ರವಾಹ ಪರಿಸ್ಥಿತಿ ಉಂಟಾಗುತ್ತಿದೆ. ಪರ್ಯಾಯ ವ್ಯವಸ್ಥೆ ಮಾಡಲು ₹4.5 ಕೋಟಿ ಕಾಮಗಾರಿ ಅಗತ್ಯವಿದೆ. ಇದಕ್ಕೆ ಸರ್ಕಾರದ ಉನ್ನತಾಧಿಕಾರ ಸಮಿತಿಯ ಅನುಮತಿ ಅಗತ್ಯವಿದೆ ಎಂದು ತುಷಾರ್ ಗಿರಿನಾಥ್ ಹೇಳಿದರು.

10-15 ವರ್ಷಗಳ ದೂರದೃಷ್ಟಿಯಿಂದ ಕ್ರಿಯಾ ಯೋಜನೆ ರೂಪಿಸಿ, ಮುಂದಿನ ಉನ್ನತಾಧಿಕಾರ ಸಮಿತಿ ಸಭೆ ಮುಂದೆ ಯೋಜನೆ ಮಂಡಿಸಿ ಎಂದು ಮುಖ್ಯಮಂತ್ರಿ ಹೇಳಿದರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಬೈರತಿ ಸುರೇಶ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರೂ ಇದ್ದರು.

ಗುತ್ತಿಗೆದಾರರ ಬದಲಿಸಿ

'ಆರು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಈಜಿಪುರ ಮೇಲ್ಸೇತುವೆ ಕಾಮಗಾರಿ ವಿಳಂಬವಾಗುತ್ತಿದೆ. 2023ರ ನ.20ರಂದು ಬಿಎಸ್‌ಸಿಪಿಎಲ್ ಕಂಪನಿಗೆ ಕಾಮಗಾರಿ ಮುಂದುವರಿಸಲು ಕಾರ್ಯಾದೇಶ ನೀಡಲಾಗಿದೆ. ಶೇ 4ರಿಂದ 6ರಷ್ಟು ಮಾತ್ರ ಪ್ರಗತಿಯಾಗಿದೆ' ಎಂದು ತುಷಾರ್ ಗಿರಿನಾಥ್ ಹೇಳಿದರು.

ಸ್ಥಳದಲ್ಲಿದ್ದ ಗುತ್ತಿಗೆದಾರರನ್ನು ತರಾಟೆಗೆ ತೆಗೆದುಕೊಂಡ ಮುಖ್ಯಮಂತ್ರಿಯವರು, 'ಕಾಮಗಾರಿ ಮಾಡಲು ಸಾಧ್ಯವಿಲ್ಲದಿದ್ದರೆ ಜಾಗ ಖಾಲಿ ಮಾಡು' ಎಂದರು. 'ಗುತ್ತಿಗೆದಾರರಿಗೆ ನಿಯಮಾನುಸಾರ ನೋಟಿಸ್ ನೀಡಿ, ಸ್ಪಂದಿಸದಿದ್ದರೆ ಕಾನೂನು ಪ್ರಕಾರ ಟೆಂಡರ್ ರದ್ದುಪಡಿಸಿ' ಬಿಬಿಎಂಪಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದಲ್ಲಿ ಇಂದು

ಬುದ್ಧ ಜಯಂತಿ: ಉದ್ಘಾಟನೆ: ಡಾ.ಬಿ. ರಮಣರಾವ್, ಅಧ್ಯಕ್ಷತೆ: ಎಂ. ವೆಂಕಟಸ್ವಾಮಿ, ಉಪನ್ಯಾಸ: ಹ.ರಾ. ಮಹೇಶ್, ಅತಿಥಿಗಳು: ಸುಭಾಷ್ ಭರಣಿ, ಎಚ್.ಆರ್. ಸುರೇಂದ್ರ, ಮಲ್ಲಿಕಾರ್ಜುನ ಬಾಲ್ಕಿ, ಶಿವರಾಜ್, ಮಂಗಳ, ಜಿ.ಸಿ. ವೆಂಕಟರಮಣಪ್ಪ, ಆಯೋಜನೆ: ನಾಗಸೇನ ವಿದ್ಯಾಲಯ, ಬುದ್ಧ ವಿಹಾರ, ಬೌದ್ಧ ಮಹಾ ಸಭಾ, ಸ್ಥಳ: ನಾಗಸೇನ ಬುದ್ಧವಿಹಾರ, ಸದಾಶಿವನಗರ, ಬೆಳಿಗ್ಗೆ 11.30ರಿಂದ

'ಬುದ್ಧ ಪೌರ್ಣಿಮೆ' ಉಪನ್ಯಾಸ ಮತ್ತು 'ಕಿಸಾ ಗೌತಮಿ' ನಾಟಕ ಪ್ರದರ್ಶನ: ರಚನೆ: ಶಿವರಾಮ ಕಾರಂತ, ನಿರ್ದೇಶನ: ಬಿ.ವಿ. ರಾಜಾರಾಂ, ಪ್ರಸ್ತುತಿ: ಕಲಾಗಂಗೋತ್ರಿ, ಸ್ಥಳ:ಇಂದಿರಾ ಗಾಂಧಿ ರಾಷ್ಟ್ರೀಯ ಕಲಾ ಕೇಂದ್ರ, ಸ್ಥಳ: ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್, ಬಿ.ಪಿ. ವಾಡಿಯಾ ರಸ್ತೆ, ಬಸವನಗುಡಿ, ಸಂಜೆ 6

ಅನ್ನಪೂರ್ಣಾಂಬ ಸಮೇತ ನಗರೇಶ್ವರಸ್ವಾಮಿ ಬ್ರಹ್ಮರಥೋತ್ಸವ: ಬೆಳಿಗ್ಗೆ 7ಕ್ಕೆ ಮೂಲ ದೇವರಿಗೆ ಪಂಚಾಮೃತ ಅಭಿಷೇಕ, ವಿಶೇಷ ಹೂವಿನ ಅಲಂಕಾರ, 10.35 ರಾಜೋಪಚಾರ, ರಥಪೂಜೆ, ಮಧ್ಯಾಹ್ನ 12.15ಕ್ಕೆ ಬ್ರಹ್ಮರಥೋತ್ಸವ, ಸಾನ್ನಿಧ್ಯ: ವಿನಯ್ ಗುರೂಜಿ, ಅತಿಥಿಗಳು: ಉದಯ್ ಬಿ. ಗರುಡಾಚಾರ್, ವಿನುತ, ಎಸ್. ಭಾಸ್ಕರ್, ಗೌರಮ್ಮ, ಎ.ಆರ್. ರಾಜಣ್ಣ, ನಾದಸ್ವರ: ಅಶ್ವತ್ಥಪ್ಪ ಮತ್ತು ತಂಡ, ವೀರಗಾಸೆ: ಪ್ರಶಾಂತ್ ಆರಾಧ್ಯ, 2ಕ್ಕೆ ದಾಸೋಹ, ಸಂಜೆ 4.30ಕ್ಕೆ ಧೂಳೋತ್ಸವ, 5.30ಕ್ಕೆ ಲಲಿತ ಸಹಸ್ರನಾಮ, 6ಕ್ಕೆ ಉಯ್ಯಾಲೋತ್ಸವ, ಆಯೋಜನೆ: ಬಿ.ಎ.ಎಸ್.ವಿ. ನಗರ್ತ ಸಮಿತಿ, ಸ್ಥಳ: ನಗರೇಶ್ವರಸ್ವಾಮಿ ದೇವಸ್ಥಾನದ ಆವರಣ, ನಗರ್ತಪೇಟೆ

ಪ್ರಸನ್ನ ವೆಂಕಟರಮಣಸ್ವಾಮಿ ರಥೋತ್ಸವ: ಉಯ್ಯಾಲೋತ್ಸವ, ಆಯೋಜನೆ: ಹಿಂದೂ ಧಾರ್ಮಿಕ ದತ್ತಿ ಇಲಾಖೆ, ಸ್ಥಳ: ಪ್ರಸನ್ನ ವೆಂಕಟರಮಣಸ್ವಾಮಿ ದೇವಸ್ಥಾನ, ಕೋಟೆ; ಸಂಜೆ 7ರಿಂದ

ಹರಿನಾಮ ಸಂಕೀರ್ತನೆ: ಗಾಯನ: ಭಾವನಾ ಮೂರ್ತಿ, ಕೀ–ಬೋರ್ಡ್: ಟಿ.ಎಸ್. ರಮೇಶ್, ತಬಲಾ: ಶ್ರೀನಿವಾಸ್ ಅನಂತರಾಮಯ್ಯ, ಆಯೋಜನೆ: ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್, ಸ್ಥಳ: ರಾಘವೇಂದ್ರ ಸ್ವಾಮಿ ಮಠ, 10ನೇ ಮುಖ್ಯರಸ್ತೆ, 6ನೇ ಅಡ್ಡರಸ್ತೆ, ಪ್ರಕಾಶನಗರ, ಸಂಜೆ 7

ಭರತನಾಟ್ಯ ಪ್ರದರ್ಶನ: ಪ್ರಸ್ತುತಿ: ಪದ್ಮಿನಿಪ್ರಿಯ ನೃತ್ಯ ಕಲಾ ಅಕಾಡೆಮಿ ವಿದ್ಯಾರ್ಥಿಗಳು, ನಿರ್ದೇಶನ: ಉಷಾ ಬಸಪ್ಪ, ಆಯೋಜನೆ ಮತ್ತು ಸ್ಥಳ: ನಂಜನಗೂಡು ರಾಘವೇಂದ್ರ ಸ್ವಾಮಿ ಮಠ, ಜಯನಗರ, 5ನೇ ಬಡಾವಣೆ, ಸಂಜೆ 7.30

ಹುಣ್ಣಿಮೆ ಹಾಡು: ಸ್ಯಾಕ್ಸೊಫೋನ್: ಶ್ರೀಧರ್ ಸಾಗರ್, ಕೊಳಲು: ವಿಶ್ವನಾಥ್ ಕಲಬುರ್ಗಿ, ವಾದ್ಯ ವೈಭವ: ಕೀಬೋರ್ಡ್: ಲೋಕೇಶ್, ತಬಲಾ: ತುಮಕೂರು ಮೋಹನ್, ರಿದಂಪ್ಯಾಡ್: ಮಂಜುನಾಥ್ ಭಟ್, ಮೃದಂಗ: ಆರ್. ಗಣೇಶ್, ಅತಿಥಿಗಳು: ಸಿ.ಕೆ. ರಾಮೇಗೌಡ, ಮೋಹನ್ ರಾವ್, ಬಿ.ಕೆ. ಶಿವರಾಂ, ಚಾಲಚಂದ್ರ, ಆಯೋಜನೆ ಮತ್ತು ಸ್ಥಳ: ಕಾಡುಮಲ್ಲೇಶ್ವರ ಗೆಳೆಯರ ಬಳಗ, ಮಲ್ಲೇಶ್ವರ, ಸಂಜೆ 6.30

'ನಗರದಲ್ಲಿ ಇಂದು' ಅಂಕಣದಲ್ಲಿ ಪ್ರಕಟಿಸಲು ಕೆಳಗಿನ ಇ–ಮೇಲ್‌ಗೆ (ಸಂಜೆ 6 ಗಂಟೆ ಒಳಗೆ)ಕಳುಹಿಸಿ. nagaradalli_indu@prajavani.co.in

ಟೀಂಲೀಸ್ ಸರ್ವೀಸಸ್ ಲಿಮಿಟೆಡ್

TeamLease® Putting India to Work

CIN: L74140KA2000PLC118395

ನೋಂದಾಯಿತ ಕಚೇರಿ: 315 ವರ್ಕ್ ಅವೆನ್ಯೂ ಕ್ಯಾಂಪಸ್, ಅಸೆಂಟ್ ಬಿಲ್ಡಿಂಗ್, ಕೋರಮಂಗಲ ಇಂಡಸ್ಟ್ರಿಯಲ್ ಲೇಔಟ್, ಜ್ಯೋತಿ ನಿವಾಸ್ ಕಾಲೇಜು ರಸ್ತೆ, ಕೋರಮಂಗಲ, ಬೆಂಗಳೂರು – 560095, ಕರ್ನಾಟಕ, ಭಾರತ.

ಈ–ಮೇಲ್: corporateaffairs@teamlease.com | ವೆಬ್‌ಸೈಟ್: https://group.teamlease.com/

ಮಾರ್ಚ್ 31, 2024ಕ್ಕೆ ಕೊನೆಯಾದ ತ್ರೈಮಾಸಿಕ ಮತ್ತು ವರ್ಷಕ್ಕೆ ಪರಿಶೋಧಿತ ಆರ್ಥಿಕ ಫಲಿತಾಂಶಗಳ ಸಾರಾಂಶ

(ಶೇರು ತಲಾವಾರು ದತ್ತವನ್ನು ಹೊರತುಪಡಿಸಿ ಉಳಿದ ಅಂಕಿಗಳು ಕೋಟಿ ರೂಪಾಯಿಗಳಲ್ಲಿ)

ವಿವರಗಳು	ಏಕಿಕೃತ			ಕ್ರೋಡೀಕೃತ		
	31.03.2024ಕ್ಕೆ ಕೊನೆಯಾದ 3 ತಿಂಗಳಿಗೆ	31.03.2024ಕ್ಕೆ ಕೊನೆಯಾದ 12 ತಿಂಗಳಿಗೆ	31.03.2023ಕ್ಕೆ ಕೊನೆಯಾದ 3 ತಿಂಗಳಿಗೆ	31.03.2024ಕ್ಕೆ ಕೊನೆಯಾದ 3 ತಿಂಗಳಿಗೆ	31.03.2024ಕ್ಕೆ ಕೊನೆಯಾದ 12 ತಿಂಗಳಿಗೆ	31.03.2023ಕ್ಕೆ ಕೊನೆಯಾದ 3 ತಿಂಗಳಿಗೆ
	ಪರಿಶೋಧಿತ	ಪರಿಶೋಧಿತ	ಪರಿಶೋಧಿತ	ಪರಿಶೋಧಿತ	ಪರಿಶೋಧಿತ	ಪರಿಶೋಧಿತ
ಕಾರ್ಯಾಚರಣೆಗಳಿಂದ ಒಟ್ಟು ಆದಾಯ	2,212.32	8,440.80	1,790.53	2,431.97	9,321.53	2,027.27
ಸದರಿ ಅವಧಿಗೆ ತೆರಿಗೆಗೆ ಮೊದಲು ನಿವ್ವಳ ಲಾಭ / (ನಷ್ಟ) (ಅಸಾಮಾನ್ಯ ಮತ್ತು/ಅಥವಾ ಅಸಾಧಾರಣ ಐಟಂಗಳು)	23.81	105.18	25.53	29.56	114.22	28.67
ಸದರಿ ಅವಧಿಗೆ ತೆರಿಗೆಗೆ ನಂತರ ನಿವ್ವಳ ಲಾಭ / (ನಷ್ಟ) (ಅಸಾಮಾನ್ಯ ಮತ್ತು/ಅಥವಾ ಅಸಾಧಾರಣ ಐಟಂಗಳು)	23.93	105.80	22.06	28.13	112.66	24.36
ಅವಧಿಗೆ ಒಟ್ಟು ಸಮಗ್ರ ಆದಾಯ [ಅವಧಿಗೆ ಲಾಭ/(ನಷ್ಟ) (ತೆರಿಗೆ ಕಳೆದು) ಮತ್ತು ಇತರ ಸಮಗ್ರ ಆದಾಯ (ತೆರಿಗೆ ಕಳೆದು)ಗಳನ್ನು ಒಳಗೊಂಡು]	23.73	105.49	22.07	27.39	111.57	24.80
ಪೇಯ್ಡ್–ಅಪ್ ಇಕ್ವಿಟಿ ಶೇರು ಬಂಡವಾಳ (ಮುಖ ಬೆಲೆ ತಲಾ 10 ರೂ.)	16.77	16.77	17.10	16.77	16.77	17.10
ಮೀಸಲುಗಳು (ಮರುಮೌಲ್ಯಮಾಪನ ಮೀಸಲುಗಳನ್ನು ಬಿಟ್ಟು) – ಬ್ಯಾಲೆನ್ಸ್ ಶೀಟ್ ಪ್ರಕಾರ	745.51	745.51	760.38	781.25	781.25	790.53
ತಲಾ ಶೇರಿಗೆ ಗಳಿಕೆ (ಮುಖ ಬೆಲೆ ತಲಾ 10 ರೂ.) (ವಾರ್ಷಿಕಿಕರಣಗೊಂಡಿಲ್ಲ) (ಎ) ಬೇಸಿಕ್	14.27	62.87	12.90	16.39	66.65	14.00
(ಬಿ) ಡೈಲ್ಯೂಟೆಡ್	14.27	62.87	12.90	16.39	66.65	14.00

ಮೇಲಿನ ಹೇಳಿಕೆಯು ಸ್ಟಾಕ್ ಎಕ್ಸ್‌ಚೇಂಜಿನಲ್ಲಿ ದಾಖಲಿಸಿರುವ, ಸೆಬಿ (ಲಿಸ್ಟಿಂಗ್ ಆಬ್ಲಿಗೇಶನ್ಸ್ ಆ್ಯಂಡ್ ಡಿಸ್‌ಕ್ಲೋಸರ್ ರಿಕ್ವೈರ್‌ಮೆಂಟ್ಸ್) ವಿಧಾಯಕಗಳು, 2015ರ ("ವಿಧಾಯಕಗಳು") ವಿಧಾಯಕ 33ರ ಅಡಿಯಲ್ಲಿ ಪ್ರಕಟವಾಗಿರುವ, ಮಾರ್ಚ್ 31, 2024ಕ್ಕೆ ಕೊನೆಯಾದ ತ್ರೈಮಾಸಿಕ ಮತ್ತು ವರ್ಷದ ಪರಿಶೋಧಿತ ಆರ್ಥಿಕ ಫಲಿತಾಂಶಗಳ ಪೂರ್ಣ ರೂಪದ ಸಾರಾಂಶವಾಗಿದೆ. ಪರಿಶೋಧಿತ ಪ್ರತ್ಯೇಕಿತ ಮತ್ತು ಕ್ರೋಡೀಕೃತ ಆರ್ಥಿಕ ಫಲಿತಾಂಶಗಳ ಪೂರ್ಣ ರೂಪವು ಸ್ಟಾಕ್ ಎಕ್ಸ್‌ಚೇಂಜುಗಳ ವೆಬ್‌ಸೈಟುಗಳಲ್ಲಿ BSE ವೆಬ್‌ಸೈಟ್ (www.bseindia.com) ಮತ್ತು NSE ವೆಬ್‌ಸೈಟ್ (www.nseindia.com) ಮತ್ತು ಕಂಪನಿಯ ವೆಬ್‌ಸೈಟ್ (https://group.teamlease.com/) ನಲ್ಲಿ ಲಭ್ಯವಿದೆ.

ಸೆಬಿ (ಲಿಸ್ಟಿಂಗ್ ಆಬ್ಲಿಗೇಶನ್ಸ್ ಆ್ಯಂಡ್ ಡಿಸ್‌ಕ್ಲೋಸರ್ ರಿಕ್ವೈರ್‌ಮೆಂಟ್ಸ್) ವಿಧಾಯಕಗಳು, 2015ರ ವಿಧಾಯಕ 33ರ ಪ್ರಕಾರ ಕಂಪನಿಯ ಮೇಲೆ ಹೇಳಿರುವ ಮಾರ್ಚ್ 31, 2024ಕ್ಕೆ ಕೊನೆಯಾದ ತ್ರೈಮಾಸಿಕ ಮತ್ತು ವರ್ಷದ ಕ್ರೋಡೀಕೃತ ಪರಿಶೋಧಿತ ಆರ್ಥಿಕ ಫಲಿತಾಂಶಗಳನ್ನು ಲೆಕ್ಕಪತ್ರ ಪರಿಶೋಧನಾ ಸಮಿತಿಯು ವಿಮರ್ಶಿಸಿದ್ದು, ಅದರ ಶಿಫಾರಸುಗಳನ್ನು ನಿರ್ದೇಶಕ ಮಂಡಲಿಯು 22ನೇ ಮೇ, 2024ರಂದು ನಡೆದ ತನ್ನ ಸಭೆಯಲ್ಲಿ ಅನುಮೋದಿಸಿದೆ.

ಟೀಂಲೀಸ್ ಸರ್ವೀಸಸ್ ಲಿಮಿಟೆಡ್ ನಿರ್ದೇಶಕ ಮಂಡಲಿಗಾಗಿ ಮತ್ತು ಅದರ ಪರವಾಗಿ ಸಹಿ/– ಅಶೋಕ್ ಕುಮಾರ್ ನೆಡುರುಮಲ್ಲಿ ವ್ಯವಸ್ಥಾಪಕ ನಿರ್ದೇಶಕರು DIN: 00151814

ದಿನಾಂಕ: ಮೇ 22, 2024 ಸ್ಥಳ: ಬೆಂಗಳೂರು

ಕಂಚನಾ ರತ್ನಾ(ಬಲ ಬದಿ) ಅವರ 'ಮರ್‌ಮರ್ಸ್ ಆ್ಯಂಡ್ ಮರ್‌ಮರೇಷನ್ಸ್' ಕಲಾಕೃತಿಗಳ ಏಕವ್ಯಕ್ತಿ ಪ್ರದರ್ಶನವನ್ನು ಇಂದು ನಗರದ ಕರ್ನಾಟಕ ಚಿತ್ರಕಲಾ ಪರಿಷತ್ತಿನಲ್ಲಿ ವೀಕ್ಷಕರಿಗೆ ವಿವರಿಸಿದರು —ಪ್ರಜಾವಾಣಿ ಚಿತ್ರ

ಮೆಮು ರೈಲು ಭಾಗಶಃ ರದ್ದು

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬೈಯಪ್ಪನಹಳ್ಳಿ ನಿಲ್ದಾಣದಲ್ಲಿ ವಾರ್ಷಿಕ ಕೇಬಲ್ ನಿರ್ವಹಣೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಮೇ 23ರಂದು ಮೆಮು ವಿಶೇಷ ರೈಲುಗಳಲ್ಲಿ ಒಂದು ರದ್ದುಗೊಳ್ಳಲಿದ್ದು, 10 ರೈಲುಗಳು ಭಾಗಶಃ ರದ್ದಾಗಲಿವೆ.

ವೈಟ್‌ಫೀಲ್ಡ್–ಕೆಎಸ್ ಬೆಂಗಳೂರು ಮೆಮು ವಿಶೇಷ ರೈಲು ರದ್ದಾಗಲಿದೆ. ಕೆಎಸ್‌ಆರ್ ಬೆಂಗಳೂರು-ಬಂಗಾರಪೇಟೆ ವಿಶೇಷ ಮೆಮು ರೈಲು ಕೆಎಸ್‌ಆರ್ ಬೆಂಗಳೂರು-ವೈಟ್‌ಫೀಲ್ಡ್ ನಡುವೆ ಭಾಗಶಃ ರದ್ದುಗೊಳ್ಳಲಿದೆ.

ಚಿಕ್ಕಬಳ್ಳಾಪುರ-ಬೆಂಗಳೂರು ಕಂಟೋನ್ಮೆಂಟ್ ಮೆಮು ರೈಲು ಮತ್ತು ಬೆಂಗಳೂರು ಕಂಟೋನ್ಮೆಂಟ್-ಚಿಕ್ಕಬಳ್ಳಾಪುರ ಮೆಮು ರೈಲು ಯಲಹಂಕ-ಬೆಂಗಳೂರು ಕಂಟೋನ್ಮೆಂಟ್ ನಡುವೆ ಭಾಗಶಃ ರದ್ದಾಗಲಿದೆ. ಬೆಂಗಳೂರು-ಮಾರಿಕುಪ್ಪಂ ಮತ್ತು ಮಾರಿಕುಪ್ಪಂ-ಕೆಎಸ್‌ಆರ್ ಬೆಂಗಳೂರು ತಲಾ ಮೂರು ರೈಲು, ಬಂಗಾರಪೇಟೆ-ಕೆಎಸ್‌ಆರ್ ಬೆಂಗಳೂರು ಮೆಮು ರೈಲು ಕೃಷ್ಣರಾಜಪುರಂ-ಕೆಎಸ್‌ಆರ್ ಬೆಂಗಳೂರು ನಡುವೆ ಸಂಚಾರ ಇರುವುದಿಲ್ಲ ಎಂದು ನೈರುತ್ಯ ರೈಲ್ವೆ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ತಿಳಿಸಿದ್ದಾರೆ.